ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 313

ಉತ್ತರಿಸಬೇಕಾದ ದಿನಾಂಕ : 17.07.2019

ಸದಸ್ಯರ ಹೆಸರು : ಶ್ರೀ ಎನ್. ಎಸ್. ಬೋಸ್ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

ಕ್ರಸ	ಪ್ರಶ್ನೆ	ಉತ್ತರ
ಅ	ರಾಯಚೂರಿನಲ್ಲಿ ನಿರ್ಮಿಸಿರುವ ಮಹಾತ್ಮಗಾಂಧಿ ಕ್ರೀಡಾಂಗಣದ ಕಾಮಗಾರಿಯು ಪೂರ್ತಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಸದರಿ ಕಾಮಗಾರಿಗೆ ಖರ್ಚಾಗಿರುವ ಅನುದಾನ ಎಷ್ಟು?	1) ರಾಯಚೂರಿನಲ್ಲಿ ನಿರ್ಮಿಸಿರುವ ಮಹಾತ್ಮಗಾಂಧಿ ಕ್ರೀಡಾಂಗಣದ ಗ್ಯಾಲರಿ ಪೂರ್ಣಗೊಂಡಿದ್ದು, ಕ್ರೀಡಾಂಗಣದ ನೆಲ ಮಟ್ಟ ಮಾಡುವ ಕಾರ್ಯ ಪ್ರಗತಿಯಲ್ಲಿದೆ. 2) ಗ್ಯಾಲರಿ ನಿರ್ಮಾಣದ ಉದ್ದೇಶಕ್ಕಾಗಿ ರೂ 308.11 ಲಕ್ಷಗಳನ್ನು ಸರ್ಕಾರ ವೆಚ್ಚ ಮಾಡಿದೆ. ಕ್ರೀಡಾಂಗಣ ನಿರ್ಮಾಣ, ಒಳ ಚರಂಡಿ, ಕ್ರೀಡಾಂಗಣದಲ್ಲಿ ಪಾರ್ಕಿಂಗ್ ವ್ಯವಸ್ಥೆ ಮತ್ತು ಇತರೆ ಬಾಕಿ ಕಾಮಗಾರಿಗಳಿಗಾಗಿ ರೂ 402.84 ಲಕ್ಷಗಳನ್ನು ಮೀಸಲಿಡಲಾಗಿದೆ. 3) ಪೆವಿಲಿಯನ್ ಕಟ್ಟಡ ನಿರ್ಮಾಣ ಕಾಮಗಾರಿ ರೂ 165.66 ಲಕ್ಷಗಳ ವೆಚ್ಚದಲ್ಲಿ ಪೂರ್ಣಗೊಂಡಿದೆ. 4) ಒಳಾಂಗಣ ಕ್ರೀಡಾಂಗಣ ನಿರ್ಮಾಣಕ್ಕಾಗಿ ಹೆಚ್.ಕೆ.ಆರ್.ಡಿ.ಬಿ. ರೂ 198.35 ಲಕ್ಷಗಳ ಅನುದಾನ ನೀಡಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. 5) ಸದರಿ ಕಾಮಗಾರಿಗಳನ್ನು ಹೆಚ್.ಕೆ.ಆರ್.ಡಿ.ಬಿ. ಅನುದಾನದಿಂದ ಕೈಗೆತ್ತಿಕೊಳ್ಳಲಾಗಿದ್ದು, ಪ್ರಾದೇಶಿಕ ಆಯುಕ್ತರು ಪ್ರತಿ ತಿಂಗಳು ಕಾಮಗಾರಿ ಪ್ರಗತಿ ಪರಿಶೀಲನೆ ಕೈಗೊಳ್ಳುತ್ತಿದ್ದಾರೆ.
ಆ	ಮಹಾತ್ಮಗಾಂಧಿ ಕ್ರೀಡಾಂಗಣದ ಕಾಮಗಾರಿಗೆ ಸರ್ಕಾರದಿಂದ ನೀಡಿರುವ ಅನುದಾನ ಎಷ್ಟು ಹಾಗೂ ಹೆಚ್.ಕೆ.ಆರ್.ಡಿ.ಬಿ. ವತಿಯಿಂದ ನೀಡಿರುವ ಅನುದಾನ ಎಷ್ಟು?	ಸದರಿ ಕಾಮಗಾರಿಯನ್ನು ಸಂಪೂರ್ಣವಾಗಿ ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅನುದಾನದಿಂದ ಕೈಗೆತ್ತಿಕೊಳ್ಳಲಾಗಿದ್ದು, ಇಲ್ಲಿಯವರೆಗೆ ಒಟ್ಟಾರೆ ರೂ 1074.96 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ.

ವೈಎಸ್ ಡಿ-/23/2019

(ಕೆ. ಎಸ್. ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.